# <u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1065** |
| ಸದಸ್ಯರ ಹೆಸರು | : | **ಶ್ರೀ. ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನ ಸಭಾ ಕ್ಷೇತ್ರ)** |
| ಉತ್ತರಿಸುವ ದಿನಾಂಕ | : | **16/12/2025** |
| ಉತ್ತರಿಸುವ ಸಚಿವರು | : | **ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು** |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಹಲವಾರು ಮಹಾನಗರ ಪಾಲಿಕೆಗಳ ಐದು ವರ್ಷದ ಅಧಿಕಾರಾವಧಿ ಈಗಾಗಲೇ ಮುಕ್ತಾಯಗೊಂಡು, ಸಾಕಷ್ಟು ಸಮಯ ಕಳೆದಿದ್ದರೂ ಸಹ ಚುನಾವಣೆ ನಡೆಯದಿರುವುದರಿಂದ ಪ್ರತೀ ವರ್ಷ ಕೇಂದ್ರ ಸರ್ಕಾರದಿಂದ ಬರುತ್ತಿದ್ದ ಕೋಟ್ಯಾಂತರ ರೂ. ಅನುದಾನವನ್ನು ಕಳೆದುಕೊಳ್ಳುವುದರ ಜೊತೆಗೆ ಸಂವಿಧಾನದ ಆಶಯಕ್ಕೆ ಧಕ್ಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅವಧಿ ಮುಕ್ತಾಯಗೊಂಡಿರುವ ಮಹಾನಗರ ಪಾಲಿಕೆಗಳಲ್ಲಿ ಮುಂದಿನ ಚುನಾವಣೆ ಕ್ರಮಗಳಿಗೆ ಅನುಕೂಲವಾಗುವಂತೆ ನಿಗದಿತ ಮೀಸಲಾತಿಯನ್ವಯ ಚುನಾವಣೆಗಳನ್ನು ನಡೆಸುವುದಕ್ಕಾಗಿ ಹೊಸದಾಗಿ ಚುನಾಯಿತ ಕೌನ್ಸಿಲ್ ಅಸ್ತಿತ್ವಕ್ಕೆ ಬರುವವರೆಗೂ ಅನುದಾನದ ಸಮಸ್ಯೆ ಕಂಡುಬರದಂತೆ ದಿನನಿತ್ಯದ ಕಾರ್ಯನಿರ್ವಹಣೆ ಮಾಡಲು ಹಾಗೂ ಆಡಳಿತ ಹಿತದೃಷ್ಟಿಯಿಂದ ಆಡಳಿತಾಧಿಕಾರಿಗಳನ್ನು ನೇಮಕ ಮಾಡಲಾಗಿರುತ್ತದೆ ಮತ್ತು ಈ ಮೂಲಕ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಆಡಳಿತ-ಅಭಿವೃದ್ಧಿ ಕಾರ್ಯಗಳು ಕುಂಠಿತವಾಗದಂತೆ ಕ್ರಮವಹಿಸಲಾಗಿರುತ್ತದೆ.<br><br>ಮಂಗಳೂರು ಮಹಾನಗರ ಪಾಲಿಕೆಯಲ್ಲಿ ಚುನಾಯಿತ ಆಡಳಿತ ಮಂಡಳಿಯ ಆಡಳಿತಾವಧಿ ಮುಕ್ತಾಯಗೊಂಡಿರುವ ಕಾರಣ ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 34 ಎಂಎಲ್ಆರ್ 2025; ದಿನಾಂಕ:20/03/2025 ರನ್ವಯ ಸುಗಮ ಆಡಳಿತ ನಿರ್ವಹಣೆಗಾಗಿ ಚುನಾಯಿತ ಆಡಳಿತ ಮಂಡಳಿಯ ಆಡಳಿತಾವಧಿ ಮುಕ್ತಾಯಗೊಂಡ ಮರುದಿನದಿಂದಲೇ ಅನ್ವಯವಾಗುವಂತೆ ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ರವರನ್ನು ಆಡಳಿತಾಧಿಕಾರಿಯನ್ನು ನೇಮಕ ಮಾಡಲಾಗಿರುತ್ತದೆ. ಮಹಾನಗರ ಪಾಲಿಕೆಗಳಲ್ಲಿನ ವಾರ್ಡುಗಳಿಗೆ ಸರ್ಕಾರದ ಆದೇಶ ಸಂಖ್ಯೆ:ನಅಇ 240 ಎಂಎಲ್ಆರ್ 2013; |
| ಆ | ಬಂದಿದ್ದಲ್ಲಿ, ಐದು ವರ್ಷದ ಅಧಿಕಾರಾವಧಿ ಈಗಾಗಲೇ ಪೂರ್ಣಗೊಳಿಸಿರುವ ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳಿಗೆ ನಿಗದಿತ ಅವಧಿಯೊಳಗೆ ಚುನಾವಣೆ ನಡೆಸದಿರಲು ಕಾರಣಗಳೇನು; | |
| ಇ | ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ಮಹಾನಗರ ಪಾಲಿಕೆಯ ಐದು ವರ್ಷದ ಅಧಿಕಾರಾವಧಿ ಮುಕ್ತಾಯಗೊಂಡಿದ್ದು, ಯಾವಾಗ ಮತ್ತು ಆ ಸಂಸ್ಥೆಗೆ ಯಾವ ದಿನಾಂಕದಿಂದ ಆಡಳಿತಾಧಿಕಾರಿಯನ್ನು ನೇಮಕ ಮಾಡಲಾಗಿದೆ; ಇದುವರೆಗೆ ಅಲ್ಲಿ ಚುನಾವಣೆ ನಡೆಸದಿರಲು ಇರುವ ಕಾರಣಗಳೇನು? | |

| | | |
|---|---|---|
| | | ದಿನಾಂಕ:02/02/2015 ರನ್ವಯ ನಿಗದಿಪಡಿಸಿರುವ ಮೀಸಲಾತಿ ಮಾರ್ಗಸೂಚಿಯನ್ನು ಅನುಸರಿಸುತ್ತಿದ್ದು, ಪ್ರಸ್ತುತ ಮಂಗಳೂರು ಮಹಾನಗರ ಪಾಲಿಕೆಯಲ್ಲಿನ ವಾರ್ಡುವಾರು ಚುನಾವಣೆಗಳಿಗಾಗಿ ಸರ್ಕಾರದಿಂದ ವಾರ್ಡುವಾರು ಮೀಸಲಾತಿಯನ್ನು ನಿಗದಿಪಡಿಸುವ ಪ್ರಕ್ರಿಯೆ ಚಾಲನೆಯಲ್ಲಿರುತ್ತದೆ. |

**ಸಂಖ್ಯೆ:ನಅಇ 57 ಎಲ್‌ಸಿಕ್ಯೂ 2025**

**(ಬಿ ಎಸ್ ಸುರೇಶ)**

**ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು**